# ಕರ್ನಾಟಕ ಸರ್ಕಾರದ ನಡಾವಳಿಗಳು

**ವಿಷಯ :** M/s Vikram Sreeram ಕಂಪನಿಗೆ ಮೈಸೂರು ಜಿಲ್ಲೆಯ, ಹೆಚ್.ಡಿ.ಕೋಟೆ ತಾಲ್ಲೂಕಿನ ಕಬಿನಿ ಡ್ಯಾಮ್ ಇದರ ಎಡದಂಡೆ ನಾಲೆಗೆ ಅಡ್ಡಲಾಗಿ 0.25 ಮೆ.ವ್ಯಾ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವ ಬಗ್ಗೆ.

**ಓದಲಾಗಿದೆ:** 1) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರ ಪತ್ರ ಸಂಖ್ಯೆ:ಕೆಆರ್ಇಡಿ 06/SH-802/Kabini LBC/2022/1049, ದಿನಾಂಕ:26.04.2022.

2) ಹಂಚಿಕೆ ಸಮಿತಿ ಸಭೆ ದಿನಾಂಕ:12.08.2022.

3) ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:15113/2022 (GM-RES)

ಸಂ. 2868
ದಿನಾಂಕ 28/9/22

**ಪ್ರಸ್ತಾವನೆ :-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಪತ್ರದನ್ವಯ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್. ಇವರು ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಯಲ್ಲಿ M/s Vikram Sreeram ಕಂಪನಿಗೆ ಮೈಸೂರು ಜಿಲ್ಲೆಯ, ಹೆಚ್.ಡಿ.ಕೋಟೆ ತಾಲ್ಲೂಕಿನ ಕಬಿನಿ ಡ್ಯಾಮ್‌ನ ಎಡದಂಡೆ ನಾಲೆಗೆ ಅಡ್ಡಲಾಗಿ 0.25 ಮೆ.ವ್ಯಾ. ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯನ್ನು ವೀಲಿಂಗ್ ಆಂಡ್ ಬ್ಯಾಂಕಿಂಗ್ ಮೂಲಕ ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿಸಿ, ಹಂಚಿಕೆ ಮಾಡಿ ಆದೇಶ ನೀಡುವ ಕುರಿತಾದ ಪ್ರಸ್ತಾವನೆಯನ್ನು ಹಂಚಿಕೆ ಸಮಿತಿ ಸಭೆಯಲ್ಲಿ ಮಂಡಿಸುವಂತೆ ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಹಂಚಿಕೆ ಸಮಿತಿ ಸಭೆಯು M/s Vikram Sreeram ಕಂಪನಿಯವರಿಗೆ ಮೈಸೂರು ಜಿಲ್ಲೆಯ, ಹೆಚ್.ಡಿ.ಕೋಟೆ ತಾಲ್ಲೂಕಿನ ಕಬಿನಿ ಡ್ಯಾಮ್ ಇದರ ಎಡದಂಡೆ ನಾಲೆಗೆ ಅಡ್ಡಲಾಗಿ 0.25 ಮೆ.ವ್ಯಾ. ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ಹಂಚಿಕೆ ಸಮಿತಿಯು ಸರ್ವಾನುಮತದಿಂದ ಶಿಫಾರಸ್ಸು ಮಾಡಿರುತ್ತದೆ.

1. RE Policy 2022-27 ರಲ್ಲಿ ಕಿರುಜಲ ವಿದ್ಯುತ್ ಯೋಜನೆಗೆ ಸಂಬಂಧಿಸಿದ ಎಲ್ಲಾ ಷರತ್ತುಗಳನ್ನು ಪಾಲಿಸಿ ಯೋಜನೆಯನ್ನು ಅನುಷ್ಠಾನಗೊಳಿಸುವುದು.
2. ಸದರಿ 0.25 ಮೆ.ವ್ಯಾ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ ಯೋಜನೆಯನ್ನು ವೀಲಿಂಗ್ ಮತ್ತು ಬ್ಯಾಂಕಿಂಗ್ ಮುಖಾಂತರ ಮೂರನೇ ವ್ಯಕ್ತಿಗೆ ಮಾರಾಟ ಮಾಡುವುದು.
3. ಸದರಿ ಸ್ಥಳವು ಜಲಸಂಪನ್ಮೂಲ ಇಲಾಖೆ ವ್ಯಾಪ್ತಿಗೆ ಒಳಪಟ್ಟಿರುವುದರಿಂದ ಗುತ್ತಿಗೆ ಪಡೆಯುವುದು ಹಾಗೂ ಸಂಬಂಧಪಟ್ಟ ಇತರೆ ಇಲಾಖೆಗಳಿಂದ ಅನುಮತಿ/ ನಿರಾಕ್ಷೇಪಣಾ ಪತ್ರ ಪಡೆಯುವುದು ಅಭಿವೃದ್ಧಿದಾರರ ಜವಾಬ್ದಾರಿಯಾಗಿರುತ್ತದೆ.
4. ಸದರಿ ಯೋಜನೆಗೆ Santhe Saragur 66 KV Substation ಗೆ ಅಥವಾ evacuation ಲಭ್ಯವಿರುವ substation ಗೆ KPTCL ಇಂದ evacuation ಅನುಮತಿ ಪಡೆದು ಯೋಜನೆಯನ್ನು ಅನುಷ್ಠಾನಗೊಳಿಸುವುದು ಅಭಿವೃದ್ಧಿದಾರರ ಜವಾಬ್ದಾರಿಯಾಗಿರುತ್ತದೆ.
5. ಅನ್ವಯಿಸುವ Water Royalty ಪಾವತಿಸುವುದು ಅಭಿವೃದ್ಧಿದಾರರ ಜವಾಬ್ದಾರಿ ಯಾಗಿರುತ್ತದೆ.

GM (Tech) KREDL

M/s Solar Power Developers Association, ಇವರ ಪರವಾಗಿ Joint Secretary, Mr. Praveen Golash, 910, 9th Floor, Surya Kiran Building 19, KG Marg, New Delhi 110001 ಇವರು ಕರ್ನಾಟಕ ನವೀಕರಿಸಬಹುದಾದ ಇಂಧನ ನೀತಿ 2022-27 ಕ್ಕೆ ಮೇಲೆ ಒದಲಾದ ಕ್ರಮ ಸಂಖ್ಯೆ (3) ರ ರಿಟ್ ಅರ್ಜಿಯ ಮೂಲಕ ತಡೆಯಾಜ್ಞೆ ನೀಡುವಂತೆ ಕೋರಿರುತ್ತಾರೆ. ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ:17.08.2022 ರ ಆದೇಶದಲ್ಲಿ ಮಧ್ಯಂತರ ಆದೇಶ ನೀಡಿರುತ್ತದೆ.

ಕೆ.ಇ.ಆರ್.ಸಿ.ಆಯೋಗವು ದಿನಾಂಕ:19.07.2022ರ ಆದೇಶದಲ್ಲಿ ನವೀಕರಿಸಬಹುದಾದ ಇಂಧನ ಯೋಜನೆಗಳಿಗೆ ಬ್ಯಾಂಕಿಂಗ್ ಸೌಲಭ್ಯವನ್ನು ಒಂದು ವರ್ಷದ ಅವಧಿಗೆ ನೀಡುವ ವಿಷಯದಲ್ಲಿ ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:1061/2019 ಹಾಗೂ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಸಿವಿಲ್ ಅಪೀಲ್ ಸಂಖ್ಯೆ:9619-9637/2019ರಲ್ಲಿ ಮಾನ್ಯ ನ್ಯಾಯಾಲಯಗಳು ನೀಡುವ ಅಂತಿಮ ಆದೇಶಗಳಿಗೊಳಪಟ್ಟು ದಿನಾಂಕ:31.10.2022ರವರೆಗೆ ವಿಸ್ತರಿಸಿ ಆದೇಶಿಸಿರುತ್ತದೆ

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಎನರ್ಜಿ 222 ಎನ್‌ಸಿಇ 2022</u>**
**<u>ಬೆಂಗಳೂರು, ದಿನಾಂಕ: 19.09.2022</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, M/s Vikram Sreeram ಕಂಪನಿಗೆ ಮೈಸೂರು ಜಿಲ್ಲೆಯ, ಹೆಚ್.ಡಿ.ಕೋಟೆ ತಾಲ್ಲೂಕಿನ ಕಬಿನಿ ಡ್ಯಾಮ್ ಇದರ ಎಡದಂಡೆ ನಾಲೆಗೆ ಅಡ್ಡಲಾಗಿ 0.25 ಮೆ.ವ್ಯಾ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ಹಂಚಿಕೆ ಮಾಡಿದೆ.

**<u>ಷರತ್ತುಗಳು:-</u>**

1. ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
2. ಅಭಿವೃದ್ಧಿದಾರರು ಈ ಯೋಜನೆಯನ್ನು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ನವೀಕರಿಸಬಹುದಾದ ಇಂಧನ ನೀತಿ 2022-27 ರ ಮೇಲೆ ದಾಖಲಿಸಿರುವ ರಿಟ್ ಅರ್ಜಿ ಸಂಖ್ಯೆ:15113/2022 (GM-RES)ಯಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ನೀತಿ 2022-27 ರ clauses 1.2(d), 6.1(c), 6.2 and 7.2 ರಲ್ಲಿನ ಷರತ್ತುಗಳಿಗೆ ಮಾನ್ಯ ನ್ಯಾಯಾಲಯವು ಮಧ್ಯಂತರ ತಡೆಯಾಜ್ಞೆ ನೀಡಿರುವುದರಿಂದ, ಸದರಿ Clauses ಗೆ ಸಂಬಂಧಿಸಿದಂತೆ ಮಾನ್ಯ ಉಚ್ಚ ನ್ಯಾಯಾಲಯದ ಅಂತಿಮ ಆದೇಶಕ್ಕೊಳಪಟ್ಟು ಕೆ.ಆರ್.ಇ.ಡಿ.ಎಲ್. ರವರು ಕ್ರಮ ವಹಿಸತಕ್ಕದ್ದು.
3. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ/ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು.
4. RE Policy 2022-27 ರಲ್ಲಿ ಕಿರುಜಲ ವಿದ್ಯುತ್ ಯೋಜನೆಗೆ ಸಂಬಂಧಿಸಿದ ಎಲ್ಲಾ ಷರತ್ತುಗಳನ್ನು ಪಾಲಿಸಿ ಯೋಜನೆಯನ್ನು ಅನುಷ್ಠಾನಗೊಳಿಸುವುದು.
5. ಸದರಿ 0.25 ಮೆ.ವ್ಯಾ ಸಾಮಾರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ ಯೋಜನೆಯನ್ನು ವೀಲಿಂಗ್ ಮತ್ತು ಬ್ಯಾಂಕಿಂಗ್ ಮುಖಾಂತರ ಮೂರನೇ ವ್ಯಕ್ತಿಗೆ ಮಾರಾಟ ಮಾಡುವುದು.

....3